**All India Radio: Bangalore**
**Regional Bulletin In Kannada**
**01.12.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ ೫ಕೆ.ಜಿ ಅಕ್ಕಿ ಬದಲಾಗಿ ಇಂದಿರಾ ಆಹಾರ ಕಿಟ್ ವಿತರಣೆ; ಪಾರದರ್ಶಕತೆ ಕಾಯ್ದುಕೊಳ್ಳಲು ಮುಖ್ಯಮಂತ್ರಿ ಸೂಚನೆ

೨. ಚಾಮರಾಜನಗರ ಜಿಲ್ಲಾಸ್ಪತ್ರೆ ಸಾವು ಪ್ರಕರಣ; ಮುಖ್ಯಮಂತ್ರಿಗೆ ವರದಿ ಸಲ್ಲಿಸಿದ ನ್ಯಾಯಮೂರ್ತಿ ಮೈಕೆಲ್ ಡಿ ಕುನ್ಹಾ ಸಮಿತಿ

೩. ಪ್ರತಿ ಹೋಬಳಿ ಕೇಂದ್ರಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆ ಆರಂಭಕ್ಕೆ ಮುಂದಿನ ಬಜೆಟ್‌ನಲ್ಲಿ ಆದ್ಯತೆ- ಸಚಿವ ಡಾ.ಎಚ್.ಸಿ.ಮಹದೇವಪ್ಪ

೪. ಹೆಣ್ಣು ಭ್ರೂಣ ಹತ್ಯೆ; ಸಮಾಜದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲು ಸರ್ಕಾರ ನಿರ್ಧಾರ

*******************

ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ ೫ಕೆ.ಜಿ ಅಕ್ಕಿ ಬದಲಾಗಿ ಇಂದಿರಾ ಆಹಾರ ಕಿಟ್ ವಿತರಿಸುವ ಕುರಿತು ಈಗಾಗಲೇ ಸಂಪುಟದಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಈ ಯೋಜನೆಯಡಿ ಕುಟುಂಬದ ಸದಸ್ಯರ ಸಂಖ್ಯೆಗೆ ಅನುಗುಣವಾಗಿ ಐದು ಕೆಜಿ ಅಕ್ಕಿ ಬದಲಾಗಿ ತೊಗರಿ ಬೇಳೆ, ಸೂರ್ಯಕಾಂತಿ ಎಣ್ಣೆ, ಸಕ್ಕರೆ, ಉಪ್ಪು ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಗೃಹ ಕಚೇರಿ ಕಾವೇರಿಯಲ್ಲಿಂದು ಇಂದಿರಾ ಆಹಾರ ಕಿಟ್ ಯೋಜನೆ ಅನುಷ್ಠಾನ ಕುರಿತು ಸಭೆ ನಡೆಸಿ, ಪ್ರತಿ ತಿಂಗಳು ಪ್ರಸ್ತುತ ೧ ಕೋಟಿ ೨೫ ಲಕ್ಷದ ೮ ಸಾವಿರದ ೨೬೨ ಇಂದಿರಾ ಆಹಾರ ಕಿಟ್ ಅಗತ್ಯವಿದ್ದು, ಇದಕ್ಕಾಗಿ ಪ್ರತಿ ತಿಂಗಳು ೪೬೬ ಕೋಟಿ ರೂಪಾಯಿ ವೆಚ್ಚ ತಗುಲಬಹುದು ಎಂದು ಅಂದಾಜಿಸಲಾಗಿದೆ. ಈ ಯೋಜನೆಯಡಿ ಪ್ರತಿ ತಿಂಗಳು ಒಟ್ಟು ೧೮ ಸಾವಿರದ ೬೨೮ ಮೆಟ್ರಿಕ್ ಟನ್ ತೊಗರಿ ಬೇಳೆ ಮತ್ತು ತಲಾ ೧೨ ಸಾವಿರದ ೪೧೯ ಮೆಟ್ರಿಕ್ ಟನ್ ಸೂರ್ಯಕಾಂತಿ ಎಣ್ಣೆ, ಸಕ್ಕರೆ ಮತ್ತು ಉಪ್ಪು ಅಗತ್ಯವಿದೆ ಎಂದು ಅಂದಾಜಿಸಲಾಗಿದೆ ಅವರು ತಿಳಿಸಿದರು.

ಉತ್ತಮ ಗುಣಮಟ್ಟದ ಆಹಾರ ಸಾಮಾಗ್ರಿಗಳನ್ನು ಪೂರೈಸಲು ಕ್ರಮ ಕೈಗೊಳ್ಳಬೇಕು. ಯಾವುದೇ ಕಾರಣಕ್ಕೂ ಗುಣಮಟ್ಟದಲ್ಲಿ ರಾಜಿಯಾಗಬಾರದು. ಇದೇ ರೀತಿ ಅಳತೆಯಲ್ಲಿ ಹೆಚ್ಚು ಕಡಿಮೆಯಾಗದಂತೆ ಎಚ್ಚರಿಕೆ ವಹಿಸಬೇಕು. ಅತ್ಯುತ್ತಮ ಗುಣಮಟ್ಟ ಕಾಯ್ದುಕೊಳ್ಳಬೇಕು. ಯಾವುದೇ ರೀತಿಯ ದೂರಿಗೆ ಅವಕಾಶವಾಗದಂತೆ ಪಾರದರ್ಶಕವಾಗಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಹೆಚ್.ಮುನಿಯಪ್ಪ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

*******************

ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ಸಂಭವಿಸಿದ ಸಾವು ನೋವುಗಳ ಕುರಿತು ತನಿಖೆ ನಡೆಸಲು ರಚಿಸಲಾಗಿದ್ದ ನಿವೃತ್ತ ನ್ಯಾಯಮೂರ್ತಿ ಮೈಕೆಲ್ ಡಿ ಕುನ್ಹಾ ಅವರ ಸಮಿತಿ ತನ್ನ ತನಿಖಾ ವರದಿಯನ್ನು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅರ್ಪಿಸಿತು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾದ ಪೊನ್ನಣ್ಣ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಅವರು ಉಪಸ್ಥಿತರಿದ್ದರು.

********************

ರಾಜ್ಯದ ಪ್ರತಿ ಹೋಬಳಿ ಕೇಂದ್ರಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆ ಆರಂಭಕ್ಕೆ ಮುಂದಿನ ಬಜೆಟ್ ನಲ್ಲಿ ಆದ್ಯತೆ ನೀಡಲಾಗುತ್ತಿದ್ದು, ಅಲೆಮಾರಿ, ದೇವದಾಸಿಯರ ಶೇಕಡಾ ೧೦ ರಷ್ಟು ಮಕ್ಕಳಿಗೆ ನೇರ ಪ್ರವೇಶ ನೀಡಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹದೇವಪ್ಪ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಲಾಖೆಯ ವಸತಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ, ಮೂಲಭೂತ ಸೌಕರ್ಯಗಳು ಉತ್ತಮವಾಗಿರುವುದರಿಂದ ಪ್ರವೇಶಕ್ಕೆ ಬೇಡಿಕೆ ಹೆಚ್ಚಾಗಿದೆ. ಹಾಗಾಗಿ ಬರುವ ಶೈಕಣಿಕ ವರ್ಷದಲ್ಲಿ ಶಾಲೆ ಇಲ್ಲದಿರುವ ೬೫ ಹೋಬಳಿಗಳಲ್ಲಿ ವಸತಿ ಶಾಲೆ ಆರಂಭಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಈ ಶಾಲೆಗಳಲ್ಲಿ ಶೇಕಡಾ ೫೦ ರಷ್ಟು ಸ್ಥಳೀಯ ವಿದ್ಯಾರ್ಥಿಗಳಿಗೆ, ಅಲೆಮಾರಿ, ದೇವದಾಸಿಯರು, ಚಿಂದಿ ಆಯುವವರ ಮಕ್ಕಳಿಗೆ ಶೇಕಡಾ ೧೦ ಸೀಟುಗಳನ್ನು ಯಾವುದೇ ಪರೀಕ್ಷೆ ಇಲ್ಲದೇ ನೇರವಾಗಿ ಪ್ರವೇಶ ನೀಡಲಾಗುವುದು ಎಂದರು.

ಸಮಾಜ ಕಲ್ಯಾಣ ಇಲಾಖೆಯಲ್ಲಿ ೫ ಸಾವಿರಕ್ಕೂ ಅಧಿಕ ವಿವಿಧ ಹಂತದ ಹುದ್ದೆಗಳು ಖಾಲಿ ಇದ್ದು, ಪ್ರಸ್ತುತ ಈ ಹುದ್ದೆಗಳನ್ನು ಹೊರ ಗುತ್ತಿಗೆ ಮೇಲೆ ನಿರ್ವಹಿಸಲಾಗುತ್ತಿದೆ. ಬರುವ ದಿನಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಪೂರ್ಣಾವಧಿಗೆ ತುಂಬಲಾಗುವುದು ಎಂದು ಸಚಿವ ಎಚ್.ಸಿ.ಮಹದೇವಪ್ಪ ಸ್ಪಷ್ಟಪಡಿಸಿದರು.

********************

ಹೆಣ್ಣು ಭ್ರೂಣ ಹತ್ಯೆಯಿಂದ ಸಮಾಜದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಮೈಸೂರಿನಲ್ಲಿಂದು ತಿಳಿಸಿದ್ದಾರೆ.

ಮೈಸೂರು ವಿಭಾಗದ ಜಿಲ್ಲೆಗಳ ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಲಿಂಗಾನುಪಾತದ ಆಧಾರದ ಮೇಲೆ ಲೆಕ್ಕ ಹಾಕುವುದರ ಬದಲು ಏಪ್ರಿಲ್ ನಿಂದ ಅಕ್ಟೋಬರ್ ತಿಂಗಳವರೆಗೆ ಜನಿಸಿದ ಮಕ್ಕಳಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳ ಗಣತಿ ನಡೆಸಿ, ಹೆಣ್ಣು ಮಗುವಿನ ಸಂಖ್ಯೆ ಕಡಿಮೆ ಇರುವ ಜಿಲ್ಲೆಯನ್ನು ಗುರಿಯನ್ನಾಗಿ ಇಟ್ಟಿಕೊಂಡು ಹೆಚ್ಚು ಐ.ಇ.ಸಿ ಕಾರ್ಯಕ್ರಮ ಆಯೋಜಿಸುವಂತೆ ಸೂಚಿಸಿದರು.

ಪ್ರತಿ ಜೀವವು ಅಮೂಲ್ಯ ಆದರಿಂದ ಹೆರಿಗೆ ಸಂದರ್ಭದಲ್ಲಿ ಗರ್ಭಿಣಿಯರು ತಪಾಸಣೆಗೆ ಒಳಗಾದಾಗ ಸೂಕ್ಷ್ಮ ಪ್ರಕರಣಗಳ ಬಗ್ಗೆ ಹೆಚ್ಚು ನಿಗಾ ವಹಿಸಬೇಕು ಹಾಗೂ ತಾಯಂದಿರ ಮರಣ ಪ್ರಕರಣಗಳು ಶೂನ್ಯವಾಗಬೇಕು ಎಂದರು.

ಹಾವು ಕಡಿತಕ್ಕೆ ಸಂಬಂಧಿಸಿದಂತೆ ಮೈಸೂರು ವಿಭಾಗದ ೮ ಜಿಲ್ಲೆಗಳಲ್ಲಿ ೪ ಸಾವಿರದ ೮೯ ಪ್ರಕರಣಗಳು ವರದಿಯಾಗಿದ್ದು, ೪ ಸಾವಿರದ ೮೪ ಪ್ರಕರಣಗಳಿಗೆ ಚಿಕಿತ್ಸೆ ನೀಡಲಾಗಿದೆ. ಇದರಲ್ಲಿ ೨೩ ಜನ

ಮೃತಪಟ್ಟಿದ್ದಾರೆ. ಆರೋಗ್ಯ ಇಲಾಖೆಯಲ್ಲಿ ಆಂಟಿ ರೇಬಿಸ್ ಹಾಗೂ ಸ್ನೇಕ್ ವ್ಯಾಕ್ಸಿನ್ ಅಗತ್ಯ ದಾಸ್ತಾನು ಇರುತ್ತದೆ ಎಂದು ಅವರು ತಿಳಿಸಿದರು.

********************

ನ್ಯಾಷನಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್- ಕೈಗಾ ವತಿಯಿಂದ ದೇಶಾದ್ಯಂತದ ಪಕ್ಷಿ ಪ್ರಿಯರಿಗೆ 'ಕೈಗಾ ಬರ್ಡ್ ಮ್ಯಾರಥಾನ್' ೧೯ನೇ ಆವೃತ್ತಿಯನ್ನು ಕೈಗಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬರುವ ಫೆಬ್ರವರಿ ೭ ಮತ್ತು ೮ ರಂದು ಹಮ್ಮಿಕೊಳ್ಳಲಾಗಿದೆ.

ಕೈಗಾ ಬರ್ಡ್ ಮ್ಯಾರಥಾನ್ ವಿನೂತನ ಮಾದರಿ ಕಾರ್ಯಕ್ರಮವಾಗಿದ್ದು, ೧೫ ವರ್ಷಗಳಿಗೂ ಹೆಚ್ಚು ಕಾಲ ನಿಯಮಿತವಾಗಿ ನಡೆಸಲಾಗುತ್ತಿರುವ ಏಕೈಕ ಪಕ್ಷಿ ಸಮೀಕ್ಷೆಯಾಗಿದ್ದು, ಹಿಂದಿನ ಸಮೀಕ್ಷೆಗಳಲ್ಲಿ ಸುತ್ತಮುತ್ತಲ ಪ್ರದೇಶದಲ್ಲಿ ಸುಮಾರು ೩೧೧ ಪಕ್ಷಿ ಪ್ರಭೇದಗಳನ್ನು ಗುರುತಿಸಲಾಗಿದೆ. ಭಾರತ್ ನ್ಯಾಚುರಲ್ ಹಿಸ್ಟರಿ ಸೊಸೈಟಿ, ಭಾರತೀಯ ವನ್ಯಜೀವಿ ಸಂಸ್ಥೆಯಂತಹ ಪ್ರತಿಷ್ಠಿತ ಸಂಸ್ಥೆಗಳ ಸದಸ್ಯರು ಹಿಂದಿನ ಆವೃತ್ತಿಗಳ ಭಾಗವಾಗಿದ್ದರು.

********************

ನ್ಯಾಷನಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್- ಕೈಗಾ ವತಿಯಿಂದ ದೇಶಾದ್ಯಂತದ ಪಕ್ಷಿ ಪ್ರಿಯರಿಗೆ 'ಕೈಗಾ ಬರ್ಡ್ ಮ್ಯಾರಥಾನ್' ೧೯ನೇ ಆವೃತ್ತಿಯನ್ನು ಕೈಗಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬರುವ ಫೆಬ್ರವರಿ ೭ ಮತ್ತು ೮ ರಂದು ಹಮ್ಮಿಕೊಳ್ಳಲಾಗಿದೆ.

ಕೈಗಾ ಬರ್ಡ್ ಮ್ಯಾರಥಾನ್ ವಿನೂತನ ಮಾದರಿ ಕಾರ್ಯಕ್ರಮವಾಗಿದ್ದು, ೧೫ ವರ್ಷಗಳಿಗೂ ಹೆಚ್ಚು ಕಾಲ ನಿಯಮಿತವಾಗಿ ನಡೆಸಲಾಗುತ್ತಿರುವ ಏಕೈಕ ಪಕ್ಷಿ ಸಮೀಕ್ಷೆಯಾಗಿದ್ದು, ಹಿಂದಿನ ಸಮೀಕ್ಷೆಗಳಲ್ಲಿ ಸುತ್ತಮುತ್ತಲ ಪ್ರದೇಶದಲ್ಲಿ ಸುಮಾರು ೩೧೧ ಪಕ್ಷಿ ಪ್ರಭೇದಗಳನ್ನು ಗುರುತಿಸಲಾಗಿದೆ. ಭಾರತ್ ನ್ಯಾಚುರಲ್ ಹಿಸ್ಟರಿ ಸೊಸೈಟಿ, ಭಾರತೀಯ ವನ್ಯಜೀವಿ ಸಂಸ್ಥೆಯಂತಹ ಪ್ರತಿಷ್ಠಿತ ಸಂಸ್ಥೆಗಳ ಸದಸ್ಯರು ಹಿಂದಿನ ಆವೃತ್ತಿಗಳ ಭಾಗವಾಗಿದ್ದರು.

********************

ಗದಗದಲ್ಲಿ ಇದೇ ೧೩ ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ಸಂಧಾನದ ಮೂಲಕ ಪ್ರಕರಣಗಳನ್ನು ತ್ವರಿತ ಇತ್ಯರ್ಥ ಪಡಿಸಿಕೊಳ್ಳಬೇಕೆಂದು ಜಿಲ್ಲಾ ಸತ್ರ ನ್ಯಾಯಾಧೀಶರಾದ ನಾಗವೇಣಿ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚಿನಂತೆ ಒಟ್ಟು ೧೪ ಬೆಂಚ್‌ಗಳನ್ನು ರಚಿಸಿದ್ದು, ಗದಗ ಜಿಲ್ಲೆಯಲ್ಲಿ ಒಟ್ಟು ೨೦ ಸಾವಿರದ ೧೭೨ ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ ೩ ಸಾವಿರದ ೨೯೧ ಪ್ರಕರಣಗಳನ್ನು ಗುರುತಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

********************

ಇಂದು ವಿಶ್ವ ಏಡ್ಸ್ ಜಾಗೃತಿ ದಿನಾಚರಣೆ. ಎಚ್.ಐ.ವಿ. ಹಾಗೂ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸುವಲ್ಲಿರುವ, ಅಡೆತಡೆಗಳನ್ನು ಕೊನೆಗಾಣಿಸುವುದು ಎಂಬ ಧ್ಯೇಯದೊಂದಿಗೆ, ಏಡ್ಸ್ ಜಾಗೃತಿ ದಿನಾಚರಣೆ ಕಾರ್ಯಕ್ರಮಗಳು ರಾಜ್ಯದ ವಿವಿಧೆಡೆ ನಡೆದವು. ಹಾಸನದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಏಡ್ಸ್ ಜಾಗೃತಿ ಕಾರ್ಯಕ್ರಮಕ್ಕೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜಿ.ಕೆ.ದಾಕ್ಷಾಯಿಣಿ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಹೆಚ್.ಐ.ವಿ ಸೋಂಕಿತರು ಸಮಾಜದ ಭಾಗ. ಅವರನ್ನ ನಿರ್ಲಕ್ಷಿಸಿ, ತುಚ್ಛವಾಗಿ ನೋಡುವ ಬದಲು, ಮಾನವೀಯ ಧೋರಣೆಯೊಂದಿಗೆ ವರ್ತಿಸಿ, ವೈದ್ಯಕೀಯ ತಪಾಸಣೆ ಹಾಗೂ ಚಿಕಿತ್ಸೆ ಪಡೆಯುವಂತೆ ಪ್ರೋತ್ಸಾಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ.ರಾಜಣ್ಣ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಬಾಗಲಕೋಟೆ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದ ಜನಜಾಗೃತಿ ಜಾಥಾಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ್ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ಜಂಟಿಯಾಗಿ ಇಂದು ಚಾಲನೆ ನೀಡಿದರು.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಆಸ್ಪತ್ರೆ ಹಾಗೂ ರೆಡ್ ರಿಬ್ಬನ್ ಕ್ಲಬ್ ಸಹಯೋಗದಲ್ಲಿ ನಡೆದ ಜಾಗೃತಿ ಜಾಥಾ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನವನಗರದ ನಾನಾ ಕಡೆ ಸಂಚರಿಸಿ, ಜಿಲ್ಲಾ ಆಸ್ಪತ್ರೆಯಲ್ಲಿ ಮುಕ್ತಾಯಗೊಂಡಿತು. ಬೆಂಗಳೂರು ಗ್ರಾ.ಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ವಿಶ್ವ ಏಡ್ಸ್ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೃಷ್ಣಲಕ್ಕಾ ರೆಡ್ಡಿ ಮಾತನಾಡಿ, ಮಾನವ ಶರೀರದ ರೋಗ ನಿರೋಧಕ ಶಕ್ತಿಯನ್ನು ಕುಂದಿಸಬಲ್ಲ ಈ ಸೋಂಕನ್ನು ಪೂರ್ಣಮಟ್ಟದಲ್ಲಿ ಗುಣ ಪಡಿಸುವ ಔಷಧಿಗಳಿಲ್ಲ. ಮುನ್ನೆಚ್ಚರಿಕೆಯಿಂದ ಮಾತ್ರ ಏಡ್ಸ್ ತಡೆಗಟ್ಟಬಹುದಾಗಿದೆ ಎಂದು ತಿಳಿಸಿದರು.

ವಿಜಯಪುರ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದ ವಿಶ್ವ ಏಡ್ಸ್ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶ ಅರವಿಂದ ಹಾಗರಗಿ, ಏಡ್ಸ್ ರೋಗ ನಿಯಂತ್ರಣಕ್ಕೆ ಜಾಗೃತಿ-ಅರಿವು ಹೊಂದುವುದು ಅತ್ಯವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಗ್ರಾಮ, ತಾಲೂಕು ಮಟ್ಟ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವ್ಯಾಪಕವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅರಿವು ಹೊಂದುವಂತೆ ಪ್ರೇರೆಪಿಸಬೇಕು ಎಂದು ತಿಳಿಸಿದರು.

**********ಮುಕ್ತಾಯ**********